ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಮೈಸೂರಿನಿಂದ ಸಂತೇಮರಹಳ್ಳಿ ಮೂಲಕ ಚಾಮರಾಜನಗರಕ್ಕೆ ಹೆಚ್ಚಿನ ಸಾರಿಗೆ ಬಸ್ ಸೌಲಭ್ಯ ಕಲ್ಪಿಸುವ ಕುರಿತು

ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):-

738 (822) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರಿನಿಂದ ತಿ. ನರಸೀಪುರ, ಮೂಗೂರು, ಸಂತೇಮರಹಳ್ಳಿ ಮೂಲ ಚಾಮರಾಜನಗರಕ್ಕೆ ಹೆಚ್ಚಿನ ಸಾರಿಗೆ ಬಸ್ ಸೌಲಭ್ಯ ಇಲ್ಲದೆ ಸಾರ್ವಜನಿಕರು, ವಿದ್ಯಾರ್ಥಿಗಳು, ಸರ್ಕಾರಿ ನೌಕರರುಗಳಿಗೆ ಅನಾನುಕೂಲ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈಗ ಹೆಚ್ಚಿನ ಸಾರಿಗೆ ಸಂಸ್ಥೆ ಬಸ್‌ಗಳು, ಮೈಸೂರು ನಂಜನಗೂಡು ಮೂಲಕ ಚಾಮರಾಜನಗರಕ್ಕೆ ಸಂಚರಿಸುತ್ತಿದ್ದು, ಸಂತೇಮರಹಳ್ಳಿ ಮೂಲಕವೂ ಹೆಚ್ಚಿನ ಸಾರಿಗೆ ಸಂಸ್ಥೆ ಬಸ್‌ಗಳನ್ನು ಓಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ; ಅದರಲ್ಲೂ ಮುಖ್ಯವಾಗಿ ಬೆಳಗ್ಗೆ ಹಾಗೂ ಸಂಜೆ ವೇಳೆ ಈ ಮಾರ್ಗದಲ್ಲಿ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಲಾಗುವುದೇ?